## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು "ಆದರ್ಶ ವಿವಾಹ" ಯೋಜನೆಯ ಅನುಷ್ಠಾನಕ್ಕೆ ಪ್ರಾದೇಶಿಕ ಆಯುಕ್ತರುಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾದ:** 1) ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 81 ಎಂಎಸ್‌ಟಿ2007. ದಿನಾಂಕ:02/05/2007.
2)ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 2 ಎಡಿಎಂ 2008,ಬೆಂಗಳೂರು. ದಿನಾಂಕ:26/05/2008.
3) ಸಂ.ಪ್ರಾಆಕ/ಎನ್‌ಎಸ್‌ಎಪಿ/ಆವಿ/ಸಿಆರ್/5/2008-09. ದಿನಾಂಕ:02/06/2008.

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರವು ರಾಜ್ಯದಲ್ಲಿ ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು "ಆದರ್ಶ ವಿವಾಹ" ಯೋಜನೆಯನ್ನು ಮೇಲೆ ಓದಲಾದ ಉಲ್ಲೇಖ (1) ರನ್ವಯ ರಾಜ್ಯದಲ್ಲಿ ಜಾರಿಗೆ ತಂದಿದ್ದು. 2007-08 ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆಯ ಅನುಷ್ಠಾನಕ್ಕಾಗಿ 1000.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿತ್ತು. ಈ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಲು 2008-09ನೇ ಸಾಲಿನಲ್ಲಿಯೂ ಈ ಯೋಜನೆಯನ್ನು ಮುಂದುವರೆಸಲಾಗಿದ್ದು, ಆಯವ್ಯಯದ ಲೆಕ್ಕ ಶೀರ್ಷಿಕೆ 2250-00-800-2-17-059 (ಯೋಜನೆ) ರಲ್ಲಿ 935.00 ಲಕ್ಷಗಳನ್ನು ಒದಗಿಸಲಾಗಿದೆ. ಈ ಪೈಕಿ ಮೊದಲನೇ ಹಂತವಾಗಿ ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ ತಲಾ 50.00 ಲಕ್ಷಗಳಂತೆ 200.00 ಲಕ್ಷಗಳನ್ನು ಬಿಡುಗಡೆ ಮಾಡಿ ಅವರ ವ್ಯಾಪ್ತಿಯಲ್ಲಿ ಬರುವ ಜಿಲ್ಲಾಧಿಕಾರಿಗಳಿಗೆ ಅವಶ್ಯಕತೆಗೆ ಅನುಗುಣವಾಗಿ ಮರು ಹಂಚಿಕೆ ಮಾಡುವಂತೆ ತಿಳಿಸಲಾಗಿರುತ್ತದೆ. ಅದರಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗಕ್ಕೂ ಸಹ 50.00 ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಇವರು ಅವರ ವ್ಯಾಪ್ತಿಯಲ್ಲಿ ಬರುವ ಜಿಲ್ಲಾಧಿಕಾರಿಗಳಿಗೆ ಉಲ್ಲೇಖ (3) ರನ್ವಯ ಮರು ಹಂಚಿಕೆ ಮಾಡಿರುತ್ತಾರೆ. ಚಿಕ್ಕಬಳ್ಳಾಪುರ ಜಿಲ್ಲೆಗೆ 5.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು. ಈ ಜಿಲ್ಲೆಗೆ ಇನ್ನೂ 36.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತರೆ ಅದರಂತೆ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 2 ಎಡಿಎಂ 2008, ಬೆಂಗಳೂರು. ದಿನಾಂಕ:19/07/2008.**

ಆದರ್ಶ ವಿವಾಹ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ-1 ರಲ್ಲಿರುವಂತೆ ಹೆಚ್ಚುವರಿ ಅನುದಾನವಾಗಿ ರೂ. 36.00 (ಮೂವತ್ತಾರು ಲಕ್ಷಗಳು ಮಾತ್ರ) ಗಳನ್ನು ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರಿಗೆ ಬಿಡುಗಡೆ ಮಾಡಲಾಗಿದೆ. ಈ ಯೋಜನೆಗೆ ತಗುಲುವ ವೆಚ್ಚವನ್ನು 2008-09 ನೇ ಸಾಲಿನ ಲೆಕ್ಕ ಶೀರ್ಷಿಕೆ 2250-00-800-2-17-059 ರ ಅಡಿಯಲ್ಲಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು, ಈ ಯೋಜನೆಯ ಉಸ್ತುವಾರಿಯನ್ನು ಪ್ರಾದೇಶಿಕ ಆಯುಕ್ತರು ಮಾಡತಕ್ಕದ್ದು.

ಮೇಲ್ಕಂಡಂತೆ ಮಂಜೂರಾದ ಮೊತ್ತವು ಆದರ್ಶ ವಿವಾಹ ಯೋಜನೆಯ ಅನುಷ್ಠಾನಕ್ಕಾಗಿ ಮಾತ್ರ ಉಪಯೋಗಿಸತಕ್ಕದ್ದು, ಎಲ್ಲಾ ಪ್ರಾದೇಶಿಕ ಆಯುಕ್ತರು ಈ ಯೋಜನೆಯ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ತಹಸೀಲ್ದಾರರ ಮೂಲಕ ವಿಸ್ತಾರವಾಗಿ ಪ್ರಚಾರ ಮಾಡತಕ್ಕದ್ದು.

ಈ ಯೋಜನೆಯ ಅಂಕಿ ಅಂಶಗಳ ವರದಿಯನ್ನು ತಾಲ್ಲೂಕುವಾರು ಹಾಗೂ ಜಿಲ್ಲಾವಾರು ಆರ್ಥಿಕ ಹಾಗೂ ಭೌತಿಕ ಪ್ರಗತಿ ವರದಿಯನ್ನು ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರು ಜಿಲ್ಲಾಧಿಕಾರಿಗಳಿಂದ

ಮಾಹಿತಿಯನ್ನು ಪಡೆದು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು. ಹಾಗೂ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ. ಎಫ್‌ಡಿ 1 ಟಿಎಫ್‌ಡಿ 1996, ದಿನಾಂಕ:10/07/1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/7/08

**(ಎಸ್.ಕಾತ್ಯಾಯಿನಿ ದೇವಿ)**
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು.**

1) ಮಹಾಲೇಖಪಾಲಕರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
4) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ.
5) ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ.
6) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
7) ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 2 ಎಡಿಎಂ 2008 ಕ್ಕೆ ಅನುಬಂಧ-1**

| ಕ್ರ.ಸಂ | ಪ್ರಾದೇಶಕ ಆಯುಕ್ತರುಗಳ ಹೆಸರು | ಬಿಡುಗಡೆ ಮಾಡಲಾದ ಅನುದಾನದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ | 36.00 |

19/7/08

(ಎಸ್.ಕಾತ್ಯಾಯಿನಿ ದೇವಿ)
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ